ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಆರೋಗ್ಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 22/5/2020

# ಆರೋಗ್ಯ ಸೇತು ಅಳವಡಿಸದೆ ಕಚೇರಿಗೆ ಬರುವಂತಿಲ್ಲ

ವಿಕ ಸುದ್ದಿಲೋಕ ಬೆಂಗಳೂರು

ಸರಕಾರಿ ಸಿಬ್ಬಂದಿ ಆರೋಗ್ಯ ಸೇತು ಆ್ಯಪ್ ಬಳಸಿಕೊಳ್ಳುವುದು ಕಡ್ಡಾಯವಾಗಿದ್ದು, ಇದನ್ನು ಬಳಸದೇ ಸಿಬ್ಬಂದಿ ಕಚೇರಿಗೆ ಬರುವಂತಿಲ್ಲ ಎಂದು ವೈದ್ಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೋವಿಡ್ ವಿರುದ್ಧದ ಹೋರಾಟದಲ್ಲಿ ಆರೋಗ್ಯ ಸೇತು ಪ್ರಬಲ ಅಸ್ತ್ರವಾಗಿ ಬಳಕೆಯಾಗುತ್ತಿದೆ. 10 ಕೋಟಿಗೂ ಅಧಿಕ ಜನ ಇದನ್ನು ಬಳಸುತ್ತಿದ್ದಾರೆ ಎಂದು ಹೇಳಿದರು.

ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆ ಬಳಸಿ ಜನರಿಗೆ ಸುಲಭವಾಗಿ ಅರ್ಥವಾಗುವ ರೀತಿ ಇದರಲ್ಲಿ ಮಾಹಿತಿ ನೀಡಲಾಗುತ್ತದೆ. ಸುರಕ್ಷತೆ ದೃಷ್ಟಿಯಿಂದ

**ಸರಕಾರಿ ಸಿಬ್ಬಂದಿಗೆ ಸಚಿವ ಸುಧಾಕರ್ ಸೂಚನೆ**



ಏನನ್ನು ಮಾಡಬೇಕು, ಏನು ಮಾಡಬಾರದು ಎಂಬ ಮಾಹಿತಿ ಇದರಲ್ಲಿದೆ. ಸೋಂಕಿತರು ನಿಕಟದಲ್ಲಿದ್ದರೆ ಈ ಆ್ಯಪ್ ಎಚ್ಚರಿಕೆ ನೀಡುತ್ತದೆ. ಕೊರೊನಾ ವೈರಸ್‌ಗೆ ಸಂಬಂಧಪಟ್ಟ ಎಲ್ಲ ಸಂದೇಹ, ಗೊಂದಲಗಳಿಗೆ ಇದರಲ್ಲಿ ಉತ್ತರವಿದೆ ಎಂದು ಅಭಿಪ್ರಾಯಪಟ್ಟರು.

ಆರೋಗ್ಯ ಸೇತು ಆ್ಯಪ್ ಸಂಪೂರ್ಣವಾಗಿ ಸುರಕ್ಷಿತವಾಗಿದೆ. ಕೇಂದ್ರ ಸರಕಾರದ ನೇರ ಮೇಲ್ವಿಚಾರಣೆಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಡೇಟಾ ಸುರಕ್ಷತೆ ಹಾಗೂ ಗೌಪ್ಯತೆ ತತ್ವ ಕಾಪಾಡಿಕೊಳ್ಳಲಾಗುತ್ತದೆ. ಈ ಬಗ್ಗೆ ಯಾವುದೇ ಅನುಮಾನ ಬೇಡ. ಪ್ರತಿಯೊಬ್ಬ ಸ್ಮಾರ್ಟ್ ಫೋನ್ ಬಳಕೆದಾರರು ಈ ಆ್ಯಪ್ ಡೌನ್ ಮಾಡಿಕೊಂಡು ಕೋವಿಡ್ ವಿರುದ್ಧದ ಹೋರಾಟದಲ್ಲಿ ಸಹಕರಿಸಬೇಕು ಎಂದು ಮನವಿ ಮಾಡಿದರು.

## 17 ಪಾಸಿಟಿವ್ ಪತ್ತೆ

ರಾಜ್ಯದಲ್ಲಿ ಇದುವರೆಗೆ 63 ಲಕ್ಷ ಜನ ಆರೋಗ್ಯ ಸೇತು ಆ್ಯಪ್ ಬಳಸುತ್ತಿದ್ದಾರೆ. ಇದರಲ್ಲಿ ಸ್ವಯಂ ನಿಗಾ ಪ್ರಕ್ರಿಯೆ ಮೂಲಕ 2255 ಜನರಿಗೆ ರೆಡ್ ಫ್ಲ್ಯಾಗ್ ಅಲರ್ಟ್ ನೀಡಲಾಗಿದೆ. ಅವರೆಲ್ಲರಿಗೂ ಪರೀಕ್ಷೆ ನಡೆಸುವಂತೆ ಸಂದೇಶ ಹೋಗಿದೆ. 233 ಮಂದಿ ಪರೀಕ್ಷೆ ಮಾಡಿಸಿಕೊಂಡಿದ್ದು, 17 ಜನರಲ್ಲಿ ಪಾಸಿಟಿವ್ ವರದಿ ಬಂದಿದೆ. ಈ ಆ್ಯಪ್‌ನಿಂದ ಪರೀಕ್ಷೆಗೆ ಒಳಗಾದವರ ಪೈಕಿ ಶೇ.7.5ರಷ್ಟು ಜನರಲ್ಲಿ ಪಾಸಿಟಿವ್ ಕಾಣಿಸಿಕೊಂಡಿದೆ ಎಂದು ತಿಳಿಸಿದರು.